## ವಿಧಾನಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್.ಎಲ್.ಭೋಜೇಗೌಡ ಇವರು ನಿಯಮ 330ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ

| | |
|---|---|
| **ವಿಷಯ:** | ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯಲ್ಲಿನ ಶಿಫಾರಸ್ಸುಗಳನ್ನು ಸಚಿವ ಸಂಪುಟದಲ್ಲಿ ಒಪ್ಪಿಕೊಂಡು ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವಂತೆ ಶೇ. 100 ರಷ್ಟು ವೇತನಾನುದಾನ, ಪಿಂಚಣಿ ಮತ್ತು ನಿವೃತ್ತಿ ಸೌಲಭ್ಯಗಳು, ಸೇವಾ ಸೌಲಭ್ಯಗಳು ಹಾಗೂ ಸೇವಾ ನಿಯಮಗಳನ್ನು (ಅನುದಾನ ಸಂಹಿತೆ) ನೀಡಲು ಡಿಸೆಂಬರ್ 2014ರಲ್ಲಿ ಜಾರಿಗೊಳಿಸಲು ಆದೇಶಿಸಲಾಗಿದೆ. ಈ ಕುರಿತು ಹಲವಾರು ಬಾರಿ ಸದನದಲ್ಲಿ ಚರ್ಚೆಯಾಗಿ ಸೇವಾ ನಿಯಮಗಳನ್ನು ರೂಪಿಸುತ್ತಿರುವುದಾಗಿ ಉತ್ತರ ನೀಡಿದ್ದರೂ ಸಹ ಇದುವರೆಗೂ ನಿಯಮಗಳನ್ನು ರೂಪಿಸಿರುವುದಿಲ್ಲ. ಆದ್ದರಿಂದ, ಇತರೆ ಅನುದಾನಿತ ಶಾಲಾ ಕಾಲೇಜುಗಳಿಗೆ ನೀಡುತ್ತಿರುವ ಎಲ್ಲಾ ಸೌಲಭ್ಯಗಳನ್ನು ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳ ನೌಕರರಿಗೂ ಮಂಜೂರು ಮಾಡಿ ಆದೇಶ ಹೊರಡಿಸಬೇಕೆಂಬ ವಿಷಯದ ಕುರಿತು ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ. |

*******

ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಅನುದಾನ ಮತ್ತು ಸೇವಾ ನಿಯಂತ್ರಣಕ್ಕೆ ಸಂಬಂಧಿಸಿದಂತೆ "The Karnataka Technical Educational Institutions (Grant-in-aid for Private Industrial Training Institutes) Rules 2023" ಅನ್ನು ದಿನಾಂಕ: 31.01.2023ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿದ್ದು, ಬಾದಿತರಿಂದ ಆಕ್ಷೇಪಣೆ/ಸಲಹೆಗಳನ್ನು ಆಹ್ವಾನಿಸಲಾಗಿತ್ತು. ಸ್ವೀಕೃತವಾದ ಆಕ್ಷೇಪಣೆ / ಸಲಹೆಗಳ ಕುರಿತು ಪರಿಶೀಲಿಸಲಾಗುತ್ತಿದೆ.

* * * *

**ಕೌಉಜೀಇ 27 ಕೈತಪ್ರ 2024**

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.